ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ನಿಯೋಜನಾ ಸಿಬ್ಬಂದಿ ಮಾತೃ ಇಲಾಖೆಗೆ ವರದಿ ಮಾಡಿಕೊಳ್ಳದಿರುವುದು

ಶ್ರೀ ಕೆ. ಸಿ. ಕೊಂಡಯ್ಯ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

478 (575) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಪೊಲೀಸ್ ಇಲಾಖೆಯಿಂದ ಕರ್ತವ್ಯ ನಿರ್ವಹಿಸಲು ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆಯೇ; ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದ ಪೊಲೀಸ್‌ರ ವಿವರಗಳನ್ನು ಒದಗಿಸುವುದು;

(ಆ) ಈ ರೀತಿ ನಿಯೋಜನೆಗೊಂಡವರು ಎಷ್ಟು ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ; ಪ್ರಸ್ತುತ ನಿಯೋಜನೆ ಮೇಲಿದ್ದವರನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಲಾಗಿದೆಯೇ;

(ಇ) ಬಿಡುಗಡೆಗೊಳಿಸಿ ಆದೇಶ ಹೊರಡಿಸಿದ್ದರೂ ನಿಯೋಜನೆ ಮೇಲಿದ್ದವರು ತಮ್ಮ ಮಾತೃ ಇಲಾಖೆಗೆ ಕರ್ತವ್ಯಕ್ಕೆ ವರದಿ ಮಾಡಿಕೊಂಡಿದ್ದಾರೆಯೇ;

(ಈ) ಇನ್ನೂ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದೇ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲೇ ಅನಧಿಕೃತ ಕೆಲಸಗಳಲ್ಲಿ ತೊಡಗಿರುವ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ; ಇದ್ದಲ್ಲಿ, ಸಂಬಂಧಿಸಿದವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದೇ?